ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 109

ಸದಸ್ಯರ ಹೆಸರು : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ
(ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 01.02.2021

ಉತ್ತರಿಸುವ ಸಚಿವರು : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಮಕ್ಕಳಿಗೆ ಬೆಳಗಿನ ಉಪಹಾರ ನೀಡುವ ಯೋಜನೆ ಜಾರಿಯಲ್ಲಿದೆಯೇ;	ರಾಜ್ಯದ 276 ಸರ್ಕಾರಿ ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿನ ಪೂರ್ವ ಪ್ರಾಥಮಿಕ ತರಗತಿಗಳಲ್ಲಿ (ಎಲ್.ಕೆ.ಜಿ ಮತ್ತು ಯು.ಕೆ.ಜಿ) ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಮಧ್ಯಾಹ್ನ ಉಪಹಾರ ಯೋಜನೆಯಡಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ವತಿಯಿಂದ ನೀಡಲಾಗುತ್ತಿರುವ ಆಹಾರ ಪ್ರಮಾಣ ಮತ್ತು ಘಟಕ ವೆಚ್ಚಕ್ಕೆ ಅನುಗುಣವಾಗಿ, ಬೆಳಗಿನ ಉಪಹಾರವನ್ನು 2019-20ನೇ ಸಾಲಿನಿಂದ ನೀಡಲು ಸರ್ಕಾರದ ಆದೇಶ ಸಂಖ್ಯೆ: ಇಡಿ 07 ಎಂಎಂಎಸ್ 2019 ದಿನಾಂಕ: 13/08/2019 ರನ್ವಯ ಅನುಮತಿ ನೀಡಲಾಗಿದೆ. ಸರ್ಕಾರಿ ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿನ ಪೂರ್ವ ಪ್ರಾಥಮಿಕ ತರಗತಿಗಳ ಹೊರತಾಗಿ ಉಳಿದ ಯಾವುದೇ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಮಕ್ಕಳಿಗೆ ಬೆಳಗಿನ ಉಪಹಾರ ನೀಡುವ ಯೋಜನೆ ಸರ್ಕಾರದಿಂದ ಜಾರಿಯಲ್ಲಿರುವುದಿಲ್ಲ.
ಆ)	ಇದ್ದಲ್ಲಿ ಎಷ್ಟು ಸರ್ಕಾರಿ ಮತ್ತು ಅನುದಾನಿತ ಶಾಲೆಗಳಿಗೆ ಈ ಸೌಲಭ್ಯವನ್ನು ಒದಗಿಸಲಾಗುತ್ತಿದೆ.	ರಾಜ್ಯದ 276 ಸರ್ಕಾರಿ ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿನ ಪೂರ್ವ ಪ್ರಾಥಮಿಕ ತರಗತಿಗಳಲ್ಲಿ (ಎಲ್.ಕೆ.ಜಿ ಮತ್ತು ಯು.ಕೆ.ಜಿ) ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಮಧ್ಯಾಹ್ನ ಉಪಹಾರ ಯೋಜನೆಯಡಿ ಬೆಳಗಿನ ಉಪಹಾರವನ್ನು ಒದಗಿಸಲಾಗಿದೆ.
ಇ)	ಸದರಿ ಯೋಜನೆಯನ್ನು ಖಾಸಗಿ ಶಾಲೆಗಳಿಗೂ ವಿಸ್ತರಿಸುವ ಉದ್ದೇಶ ಸರ್ಕಾರಕ್ಕಿದೆಯೇ?	ಸದರಿ ಯೋಜನೆಯನ್ನು ಖಾಸಗಿ ಶಾಲೆಗಳಿಗೆ ವಿಸ್ತರಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಇಪಿ 04 ಎಂಎಂಎಸ್ 2021

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು